ಸಂಯುಕ್ತ ಕರ್ನಾಟಕ

**Tuesday 31st July 2018**

# RVCE Graduate Programme: Advice for Technical Research by IIM Director Prof. Raghuram

# ತಾಂತ್ರಿಕ ಸಂಶೋಧನೆಗೆ ಸಲಹೆ

**ಸಂ.ಕ ಸಮಾಚಾರ ಕೆಂಗೇರಿ**

ಸಾರಿಗೆ, ವಿದ್ಯುತ್, ಕೃಷಿ ಹಾಗೂ ರೈಲ್ವೆಗಳ ಪ್ರಗತಿಗೆ ಅಡ್ಡಿಯಾಗಿರುವ ಸಮಸ್ಯೆಗಳ ಕುರಿತು ತಾಂತ್ರಿಕ ಪದವೀಧರರು ಸಂಶೋಧನೆ ನಡೆಸಬೇಕೆಂದು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ನಿರ್ದೇಶಕ ಪ್ರೊ.ಜಿ. ರಘುರಾಮ್ ಹೇಳಿದರು.

ಆರ್.ವಿ. ತಾಂತ್ರಿಕ ಮಹಾವಿದ್ಯಾಲಯ ಆಯೋಜಿಸಿದ್ದ ಸಮಾರಂಭದಲ್ಲಿ ಪದವೀಧರರಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದ ಅವರು, ತಂತ್ರಜ್ಞಾನಗಳ ಆವಿಷ್ಕಾರಗಳಿಗೆ ತಕ್ಕಂತೆ ವಿದ್ಯಾರ್ಥಿಗಳು ಕೌಶಲ್ಯ ತರಬೇತಿ ಪಡೆಯಬೇಕು. ತಂತ್ರಜ್ಞಾನವನ್ನು ಆರ್ಥಿಕ ಮತ್ತು ಸಾಮಾಜಿಕ ಕ್ಷೇತ್ರಗಳ ಬೆಳವಣಿಗೆಗೆ ಸಹಕಾರಿ ಆಗುವಂತೆ ರೂಪಿಸಬೇಕು. ಜೊತೆಗೆ ಪರಿಸರ ಸ್ನೇಹಿ ವಾತಾವರಣ ನಿರ್ಮಾಣದೆಡೆಗೆ ಹೆಚ್ಚಿನ ಆದ್ಯತೆ ನೀಡಿ ದೇಶದ ಪ್ರಗತಿಗೆ ಕೊಡುಗೆ ನೀಡಬೇಕೆಂದರು.

ದೇಶದಲ್ಲಿ ದೊರಕುವ ಅವಕಾಶ ಹಾಗೂ ಸಂಪನ್ಮೂಲಗಳನ್ನು ಸರಿಯಾದ ಕ್ರಮದಲ್ಲಿ ಸದುಪಯೋಗ ಪಡಿಸಿಕೊಂಡು, ಸಂಶೋಧನೆಗಳ ಮೂಲಕ ಪ್ರಪಂಚದ ಗಮನ ಸೆಳೆದು ದೇಶದ ಕೀರ್ತಿಯನ್ನು ಹೆಚ್ಚಿಸಿ. ರಾಷ್ಟ್ರದ ತಂತ್ರಜ್ಞಾನ ಕ್ಷೇತ್ರವನ್ನು ವಿಶ್ವ ಮಟ್ಟಕ್ಕೆ ಕೊಂಡೊಯ್ಯುವಂತೆ ಸಲಹೆ ನೀಡಿದರು. ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ.ಎಂ.ಕೆ. ಪಾಂಡುರಂಗ ಶೆಟ್ಟಿ, ಟ್ರಸ್ಟ್ ಖಜಾಂಜಿ ಕೆ.ಜಿ. ಸುಬ್ಬರಾಮ್, ಗೌರವ ಕಾರ್ಯದರ್ಶಿ ಎ.ವಿ.ಎಸ್. ಮೂರ್ತಿ, ಉದ್ಯಮಿ ಡಾ.ಎಂ.ಪಿ. ಶ್ಯಾಮ್, ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಹ್ಮಣ್ಯಂ ಮತ್ತಿತರರಿದ್ದರು.




ಆರ್.ವಿ. ತಾಂತ್ರಿಕ ಮಹಾವಿದ್ಯಾಲಯ ಆಯೋಜಿಸಿದ್ದ ಪದವಿ ಪ್ರದಾನ ಕಾರ್ಯಕ್ರಮದಲ್ಲಿ 'ಐಐಎಂ' ನಿರ್ದೇಶಕ ಪ್ರೊ. ಜಿ. ರಘುರಾಮ್, ಡಾ.ಎಂ.ಕೆ. ಪಾಂಡುರಂಗ ಶೆಟ್ಟಿ, ಕೆ.ಜಿ. ಸುಬ್ಬರಾಮ್, ಡಾ.ಕೆ. ಎನ್. ಸುಬ್ರಹ್ಮಣ್ಯಂ, ಪದವೀಧರ ವಿದ್ಯಾರ್ಥಿಗಳು ಸೇರಿದಂತೆ ಮತ್ತಿತರರಿದ್ದರು.